ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.

ದಿನಾಂಕಃ 13-02-2026

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎ.ಆರ್.ಎಸ್ ವಕೀಲರಿಂದಃ-**

ಈ ಪ್ರಕರಣದಲ್ಲಿ ನಾನು ಅರ್ಜಿದಾರನಾಗಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಘಟನಾ ಸ್ಥಳದ ಪಂಚನಾಮೆ ಪ್ರತಿ, ಚಾರ್ಜ್ ಶೀಟ್ ಪ್ರತಿ, ಗಾಯದ ಪ್ರಮಾಣ ಪತ್ರ, ಐ.ಎಂ.ವಿ. ವರದಿಯ ಪ್ರತಿ, ಕಲಂ 133 ರಡಿ ನೋಟಿಸ್ ಮತ್ತು ಅದರ ಉತ್ತರದ ಪ್ರತಿ ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-8 ಎಂದು



ಗುರುತಿಸಲಾಯಿತು. ಅದೇ ರೀತಿ ಒಂದು ಡಿಸ್ಚಾರ್ಜ್ ಸಮ್ಮರಿಯ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ಒಂದು ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಸದರಿ ದಾಖಲೆಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-10 ಎಂದು ಗುರುತಿಸಲಾಯಿತು. ಅದೇ ರೀತಿ 23 ಔಷಧಿ ವೆಚ್ಚ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-11 ರಿಂದ ನಿಪಿ-33 ಎಂದು ಗುರುತಿಸಲಾಯಿತು. ಸದ್ರಿ ಎದುರುದಾರ ಪರಿ ವಕೀಲರು ನಿಪಿ-13 ರಿಂದ ನಿಪಿ-16 ಹಾಗೂ ನಿಪಿ-19 ರಿಂದ ನಿಪಿ-22 ರ ಔಷಧಿ ವೆಚ್ಚ ರಶೀದಿಗಳು ಕ್ರೆಡಿಟ್ ಬಿಲ್ ಇದ್ದು ಅವುಗಳನ್ನು ಗುರುತಿಸಲು ತಕರಾರ ಎತ್ತಿರುವುದರಿಂದ ಅವುಗಳನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-13 ರಿಂದ ನಿಪಿ-16

ಹಾಗೂ ನಿಪಿ–19 ರಿಂದ ನಿಪಿ–22 ಎಂದು ಗುರುತಿಸಲಾಗಿದೆ. ಅದೇ ರೀತಿ ಎದುರುದಾರ ಪರ ವಕೀಲರು ನಿಪಿ–24 ರಲ್ಲಿ ತೋರಿಸಿರುವ ವೆಚ್ಚವು ನಿಪಿ–11 ರಲ್ಲಿಯೂ ಸಹ ತೋರಿಸಿರುತ್ತಾರೆ. ಆದ್ದರಿಂದ ಅದನ್ನು ಸಲ ಗುರುತಿಸಲು ತಕರಾರ ಎತ್ತಿರುವುದರಿಂದ ಅವುಗಳನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ–24 ಎಂದು ಗುರುತಿಸಲಾಗಿದೆ. ಅದೇ ರೀತಿ ಸ್ಕ್ಯಾನಿಂಗ್ ರಿಪೋರ್ಟ ಮತ್ತು ಔಷಧಿ ಚೀಟಿ ಹಾಗೂ ನಾಲ್ಕು ಎಕ್ಸರೇ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ–34 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೇಳಿಕೊಂಡಂತೆ ಪರಿಹಾರ ಕೊಡಿಸಬೇಕಾಗಿ ವಿನಂತಿ.

**ಪಾಟೀ ಸವಾಲುಃ**

1 ನೇ ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿರುತ್ತಾರೆ. ಆದ್ದರಿಂದ ಅವರ ಪರ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

2 ನೇ ಎದುರುದಾರ ಪರ ವಕೀಲರಾದ ಶ್ರೀ ಎಸ್ ಎಮ್ ಬಿ ವಕೀಲರು ಹಾಜರಿದ್ದು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಮೆಂಬರ್ ಎಡಿಶನಲ್ ಎಂ.ಎ.ಸಿ.ಟಿ. ಮತ್ತು**

**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**